**All India Radio: Bangalore**
**National Bulletin In Kannada**
**21.04.2026 07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**21.04.2026 07.35 a.m.**

**<><><>**

ಮುಖ್ಯಾಂಶಗಳು

1. ತಮಿಳುನಾಡು, ಪಶ್ಚಿಮ ಬಂಗಾಳ ವಿಧಾನಸಭೆ ಚುನಾವಣೆ: ಬಹಿರಂಗ ಪ್ರಚಾರಕ್ಕೆ ಇಂದು ತೆರೆ
2. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದಿನಿಂದ ಜರ್ಮನಿಗೆ ಮೂರು ದಿನಗಳ ಪ್ರವಾಸ
3. ಅಮೆರಿಕ ಮಧ್ಯಸ್ಥಿಕೆಯಲ್ಲಿ ಇದೇ ಗುರುವಾರ, ಲೆಬನಾನ್-ಇಸ್ರೇಲ್ ನಡುವೆ ಎರಡನೇ ಸುತ್ತಿನ ಮಾತುಕತೆ
4. ಐಪಿಎಲ್ ಟಿ-೨೦ ಕ್ರಿಕೆಟ್: ಗುಜರಾತ್ ಟೈಟಾನ್ಸ್ ವಿರುದ್ಧ ಮುಂಬೈ ಇಂಡಿಯನ್ಸ್ ತಂಡಕ್ಕೆ ಭರ್ಜರಿ ಗೆಲುವು

<><><>

ತಮಿಳುನಾಡಿನಲ್ಲಿ ಒಂದೇ ಹಂತ ಮತ್ತು ಪಶ್ಚಿಮ ಬಂಗಾಳದಲ್ಲಿ ಮೊದಲ ಹಂತದ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ಇಂದು ತೆರೆ ಬೀಳಲಿದೆ. ವಿವಿಧ ರಾಜಕೀಯ ಪಕ್ಷಗಳ ಉನ್ನತ ನಾಯಕರು ಸತತ ರ‍್ಯಾಲಿಗಳು ಮತ್ತು ಸಾರ್ವಜನಿಕ ಸಭೆಗಳ ಮೂಲಕ ಮತದಾರರನ್ನು ಸೆಳೆಯಲು ಅಂತಿಮ ಪ್ರಯತ್ನ ನಡೆಸುತ್ತಿದ್ದಾರೆ. ಎರಡೂ ರಾಜ್ಯಗಳಲ್ಲಿ ಇದೇ ಗುರುವಾರ ಮತದಾನ ನಡೆಯಲಿದೆ. ಪಶ್ಚಿಮ ಬಂಗಾಳ ಹಾಗೂ ತಮಿಳುನಾಡಿನಲ್ಲಿ ಮುಕ್ತ ಮತ್ತು ನ್ಯಾಯಸಮ್ಮತ ಮತದಾನ ಖಚಿತಪಡಿಸಿಕೊಳ್ಳಲು ಚುನಾವಣಾ ಆಯೋಗ, ಮತದಾನಕ್ಕೆ ಮುಂಚಿತವಾಗಿ ೪೮ ಗಂಟೆಗಳ ಕಾಲ ಮದ್ಯ ನಿಷೇಧಿಸಿ ಆದೇಶ ಹೊರಡಿಸಿದೆ.

<><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಒಡಿಶಾಗೆ ಭೇಟಿ ನೀಡಲಿದ್ದಾರೆ. ಭೇಟಿಯ ಸಮಯದಲ್ಲಿ, ರಾಷ್ಟ್ರಪತಿಗಳು, ರೂರ್ಕೆಲಾದಲ್ಲಿ ನಡೆಯುವ ಸಾರ್ವಜನಿಕ ಸಮಾರಂಭದಲ್ಲಿ ತಾರಾಲಯ, ವಿಜ್ಞಾನ ಕೇಂದ್ರ ಮತ್ತು ನಿರ್ಮಲ್ ಮುಂಡಾ ಪರಿವೇಶ್ ಮಾರ್ಗವನ್ನು ಉದ್ಘಾಟಿಸಲಿದ್ದಾರೆ. ರೂರ್ಕೆಲಾದಲ್ಲಿ ಬುಡಕಟ್ಟು ವಸ್ತುಸಂಗ್ರಹಾಲಯ, ಸಮಗ್ರ ಕಮಾಂಡ್ ಮತ್ತು ನಿಯಂತ್ರಣ ಕೇಂದ್ರವನ್ನು ಸಹ ರಾಷ್ಟ್ರಪತಿ ದ್ರೌಪದಿ ಮುರ್ಮು ಉದ್ಘಾಟಿಸಲಿದ್ದಾರೆ.

<><><>

ಎರಡೂ ದೇಶಗಳ ನಡುವಿನ ಕಾರ್ಯತಂತ್ರದ ರಕ್ಷಣಾ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸಲು ರಕ್ಷಣಾ ಸಚಿವ ರಾಜನಾಥ್ ಸಿಂಗ್, ಇಂದಿನಿಂದ ಜರ್ಮನಿಗೆ ಮೂರು ದಿನಗಳ ಪ್ರವಾಸ ಕೈಗೊಳ್ಳಲಿದ್ದಾರೆ. ಈ ಭೇಟಿಯು ರಕ್ಷಣಾ ಸಹಕಾರ ಉಪಕ್ರಮಗಳನ್ನು ಪರಿಶೀಲಿಸಲು ಮತ್ತು ಎರಡೂ ದೇಶಗಳ ರಕ್ಷಣಾ ಕೈಗಾರಿಕೆಗಳ ನಡುವಿನ ಸಹಯೋಗಕ್ಕಾಗಿ ಹೊಸ ಮಾರ್ಗಗಳನ್ನು ಗುರುತಿಸಲು ಅವಕಾಶ ಒದಗಿಸುತ್ತದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಭೇಟಿಯ ಸಮಯದಲ್ಲಿ, ಸಚಿವ ರಾಜನಾಥ್ ಸಿಂಗ್ ಅವರು ಜರ್ಮನಿ ರಕ್ಷಣಾ ಸಚಿವ ಬೋರಿಸ್ ಪಿಸ್ಟೋರಿಯಸ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ರಕ್ಷಣಾ ಕೈಗಾರಿಕಾ ಸಹಯೋಗ ಹೆಚ್ಚಿಸುವುದು, ಸೈಬರ್ ಭದ್ರತೆ, ಕೃತಕ ಬುದ್ಧಿಮತ್ತೆ ಮತ್ತು ಡ್ರೋನ್‌ಗಳಂತಹ ಉದಯೋನ್ಮುಖ ಕ್ಷೇತ್ರಗಳಲ್ಲಿ ಅವಕಾಶಗಳನ್ನು ಅನ್ವೇಷಿಸುವ ಬಗ್ಗೆ ಚರ್ಚೆಗಳು ಗಮನಹರಿಸಲಿವೆ. ವಿಶ್ವಸಂಸ್ಥೆ ಶಾಂತಿಪಾಲನಾ ಕಾರ್ಯಾಚರಣೆ ತರಬೇತಿಯಲ್ಲಿ ಸಹಕಾರಕ್ಕಾಗಿ ರಕ್ಷಣಾ ಕೈಗಾರಿಕಾ ಸಹಕಾರ ಮಾರ್ಗಸೂಚಿ ಮತ್ತು ಅನುಷ್ಠಾನ ವ್ಯವಸ್ಥೆಗೆ ಇದೇ ವೇಳೆ ಸಹಿ ಹಾಕುವ ಸಾಧ್ಯತೆಯಿದೆ. ಮೇಕ್-ಇನ್-ಇಂಡಿಯಾ ಉಪಕ್ರಮದ ಅಡಿಯಲ್ಲಿ ಜಂಟಿ ಅಭಿವೃದ್ಧಿ ಮತ್ತು ಸಹ-ಉತ್ಪಾದನೆಯನ್ನು ಉತ್ತೇಜಿಸುವ ದೃಷ್ಟಿಯಿಂದ ರಕ್ಷಣಾ ಸಚಿವರು, ಜರ್ಮನ್ ರಕ್ಷಣಾ ಉದ್ಯಮದ ಪ್ರಮುಖ ಪ್ರತಿನಿಧಿಗಳೊಂದಿಗೆ ಸಂವಹನ ನಡೆಸುವ ನಿರೀಕ್ಷೆಯಿದೆ. ಈ ಭೇಟಿಯು ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಗಟ್ಟಿಗೊಳಿಸುವ ಹಾಗೂ ಪ್ರಾದೇಶಿಕ ಮತ್ತು ಜಾಗತಿಕ ಶಾಂತಿ, ಸ್ಥಿರತೆ ಮತ್ತು ಸಮೃದ್ಧಿಗೆ ಕೊಡುಗೆ ನೀಡುವ ಗುರಿಯನ್ನು ಹೊಂದಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

<><><>

ಈ ತಿಂಗಳ ೧೭ ರ ವೇಳೆಗೆ ದೇಶಾದ್ಯಂತ ೬೯ ಲಕ್ಷ ಹೆಕ್ಟೇರ್‌ಗೂ ಹೆಚ್ಚು ಬೆಳೆ ಬಿತ್ತನೆ ಮಾಡಲಾಗಿದೆ. ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯ ಬೇಸಿಗೆ ಬೆಳೆಗಳ ದತ್ತಾಂಶವನ್ನು ಬಿಡುಗಡೆ ಮಾಡಿದೆ. ೩೦ ಲಕ್ಷ ಹೆಕ್ಟೇರ್‌ಗಳಲ್ಲಿ ಭತ್ತವನ್ನು ಬಿತ್ತಲಾಗಿದ್ದು, ದ್ವಿದಳ ಧಾನ್ಯಗಳು ೧೫.೪೭ ಲಕ್ಷ ಹೆಕ್ಟೇರ್‌ಗಳಲ್ಲಿ ಬಿತ್ತಲಾಗಿದೆ. ಸುಮಾರು ೧೩.೮೧ ಲಕ್ಷ ಹೆಕ್ಟೇರ್‌ಗಳಲ್ಲಿ 'ಶ್ರೀ ಅನ್ನ' ಬಿತ್ತಲಾಗಿದೆ. ಎಣ್ಣೆಕಾಳುಗಳನ್ನು ಬಿತ್ತಿದ ಪ್ರದೇಶವು ೬.೧೪ ಲಕ್ಷ ಹೆಕ್ಟೇರ್‌ಗಳನ್ನು ದಾಟಿದೆ.

<><><>

ರೈತರನ್ನು ಬೆಂಬಲಿಸಲು ಮತ್ತು ದೇಶೀಯ ಮಾರುಕಟ್ಟೆಗಳಲ್ಲಿ ಸ್ಥಿರತೆಯನ್ನು ಕಾಪಾಡಿಕೊಳ್ಳಲು ಕೇಂದ್ರ ಸರ್ಕಾರ, ಹೆಚ್ಚುವರಿಯಾಗಿ ೨೫ ಲಕ್ಷ ಮೆಟ್ರಿಕ್ ಟನ್ ಗೋಧಿಯನ್ನು ರಫ್ತು ಮಾಡಲು ಅನುಮೋದನೆ ನೀಡಿದೆ. ಉತ್ಪಾದನೆ, ದಾಸ್ತಾನು ಲಭ್ಯತೆ ಮತ್ತು ಬೆಲೆ ಪ್ರವೃತ್ತಿಗಳ ಪರಿಶೀಲನೆಯ ನಂತರ ಈ

ನಿರ್ಧಾರ ತೆಗೆದುಕೊಳ್ಳಲಾಗಿದೆ. ೨೦೨೬ ರ ಹಿಂಗಾರು ಋತುವಿನಲ್ಲಿ ಗೋಧಿ ಬೆಳೆ, ೩೨೮ ಲಕ್ಷ ಹೆಕ್ಟೇರ್‌ಗಳಿಗಿಂತ ಹೆಚ್ಚಾಗಿದ್ದು, ಈ ಹೆಚ್ಚಳವು ರೈತರ ವಿಶ್ವಾಸ ಹೆಚ್ಚುತ್ತಿರುವುದನ್ನು ಪ್ರತಿಬಿಂಬಿಸುತ್ತದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವಾಲಯ ತಿಳಿಸಿದೆ. ಈ ವರ್ಷದ ಆರಂಭದಲ್ಲಿ, ಸರ್ಕಾರ, ಜನವರಿಯಲ್ಲಿ ೫ ಲಕ್ಷ ಮೆಟ್ರಿಕ್ ಟನ್ ಗೋಧಿ ಉತ್ಪನ್ನಗಳನ್ನು ರಫ್ತು ಮಾಡಲು ಅನುಮೋದನೆ ನೀಡಿತ್ತು. ನಂತರ ಫೆಬ್ರವರಿಯಲ್ಲಿ ಹೆಚ್ಚುವರಿ ೫ ಲಕ್ಷ ಮೆಟ್ರಿಕ್ ಟನ್ ಗೋಧಿ ಉತ್ಪನ್ನಗಳು ಮತ್ತು ೨೫ ಲಕ್ಷ ಮೆಟ್ರಿಕ್ ಟನ್ ಗೋಧಿಯನ್ನು ರಫ್ತು ಮಾಡಲು ಅನುಮೋದನೆ ನೀಡಿತ್ತು.

<><><><>

ಪ್ರಾದೇಶಿಕ ಉದ್ವಿಗ್ನತೆಗಳ ನಡುವೆ, ಅಮೆರಿಕ ಇದೇ ಗುರುವಾರ, ಲೆಬನಾನ್ ಮತ್ತು ಇಸ್ರೇಲ್ ನಡುವೆ ಎರಡನೇ ಸುತ್ತಿನ ಮಾತುಕತೆಗಳನ್ನು ಆಯೋಜಿಸಲಿದೆ ಎಂದು ಅಮೆರಿಕ ವಿದೇಶಾಂಗ ಇಲಾಖೆ ದೃಢಪಡಿಸಿದೆ. ಕಳೆದ ವಾರ ಹೆಜ್ಬೊಲ್ಲಾ ಸಂಘಟನೆ ಮತ್ತು ಇಸ್ರೇಲ್ ನಡುವೆ ಕದನ ವಿರಾಮ ಜಾರಿಗೆ ಬಂದ ನಂತರ ನಡೆಯಲಿರುವ ಮೊದಲ ಮಾತುಕತೆ ಇದಾಗಿದೆ. ವಾಷಿಂಗ್ಟನ್‌ನಲ್ಲಿರುವ ಲೆಬನಾನ್‌ನ ರಾಯಭಾರಿ ನಾಡಾ ಹಮಾದೆ ಮತ್ತು ಇಸ್ರೇಲ್ ರಾಯಭಾರಿ ಯೆಚಿಯಲ್ ಲೀಟರ್ ಏಪ್ರಿಲ್ ೧೪ ರಂದು ನಡೆದ ಮೊದಲ ಸುತ್ತಿನ ಮಾತುಕತೆಗಳ ನೇತೃತ್ವ ವಹಿಸಿದ್ದರು. ಇದರಲ್ಲಿ ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಕೂಡ ಭಾಗವಹಿಸಿದ್ದರು. ಸಂದರ್ಶನವೊಂದರಲ್ಲಿ ಮಾತನಾಡಿದ ಲೆಬನಾನ್ ಅಧ್ಯಕ್ಷ ಜೋಸೆಫ್ ಔನ್ ಬೈರುತ್, ಇಸ್ರೇಲ್‌ನೊಂದಿಗೆ ಮಾತುಕತೆಗಳ ಹಾದಿಯಲ್ಲಿ ಲೆಬನಾನ್ ಮುಂದುವರಿಯುತ್ತದೆ ಎಂದು ಪುನರುಚ್ಚರಿಸಿದ್ದಾರೆ. ಆದರೆ, ಹೆಜ್ಬೊಲ್ಲಾ ಮುಖ್ಯಸ್ಥ ನಯೀಮ್ ಖಾಸೆಮ್ ಈ ಮಾತುಕತೆಗಳನ್ನು ತಿರಸ್ಕರಿಸಿದ್ದಾರೆ.

<><><><>

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ನವದೆಹಲಿಯಲ್ಲಿ ನಿನ್ನೆ ಕೊರಿಯಾದ ಹಣಕಾಸು ಸೇವಾ ಆಯೋಗದ ಅಧ್ಯಕ್ಷೆ ಲೀ ಇಯೊಗ್-ವೀನ್ ಅವರನ್ನು ಭೇಟಿಯಾದರು. ಎರಡೂ ದೇಶಗಳ ನಡುವೆ ಸಹಕಾರ ಮತ್ತು ಮಾಹಿತಿ ಹಂಚಿಕೆಯನ್ನು ಹೆಚ್ಚಿಸುವ ಮಾರ್ಗಗಳ ಕುರಿತು ಚರ್ಚಿಸಲಾಯಿತು. ಈ ಕ್ಷೇತ್ರಗಳಲ್ಲಿ ಫಿನ್‌ಟೆಕ್ ನಾವೀನ್ಯತೆ, ಡಿಜಿಟಲ್ ಪಾವತಿಗಳು, ಹೂಡಿಕೆ, ಗಿಫ್ಟ್ ಸಿಟಿ ಮತ್ತು ಅಂತಾರಾಷ್ಟ್ರೀಯ ಹಣಕಾಸು ಸೇವೆಗಳ ಕೇಂದ್ರಗಳ ಪ್ರಾಧಿಕಾರದಲ್ಲಿ ವ್ಯವಹಾರಕ್ಕೆ ಅವಕಾಶಗಳು ಸೇರಿವೆ ಎಂದು ಹಣಕಾಸು ಸಚಿವಾಲಯ ತಿಳಿಸಿದೆ. ಇದೇ ವೇಳೆ ಅಂತಾರಾಷ್ಟ್ರೀಯ ಹಣಕಾಸು ಸೇವೆಗಳ ಕೇಂದ್ರಗಳ ಪ್ರಾಧಿಕಾರ ಮತ್ತು ಕೊರಿಯಾದ ಹಣಕಾಸು ಸೇವೆಗಳ ಆಯೋಗವು ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಿವೆ.

<><><><>

ಭಾರತ ಮತ್ತು ಅಮೆರಿಕ ಎರಡೂ ದೇಶಗಳ ನಡುವಿನ ಬಹುನಿರೀಕ್ಷಿತ ವ್ಯಾಪಾರ ಒಪ್ಪಂದಕ್ಕೆ ಅಂತಿಮ ರೂಪ ನೀಡುವ ನಿಟ್ಟಿನಲ್ಲಿ ವಾಷಿಂಗ್ಟನ್‌ನಲ್ಲಿ ಹೊಸ ಸುತ್ತಿನ ವ್ಯಾಪಾರ ಮಾತುಕತೆಗಳು ಪ್ರಾರಂಭವಾಗಿವೆ. ಇದೇ ೨೦ ರಿಂದ ೨೨ ರವರೆಗೆ ನಿಗದಿಯಾಗಿರುವ ಮೂರು ದಿನಗಳ ಮಾತುಕತೆಗಾಗಿ ೧೨ ಮಂದಿ ಭಾರತೀಯ ಅಧಿಕಾರಿಗಳ ತಂಡ, ಅಮೆರಿಕ ರಾಜಧಾನಿಗೆ ತೆರಳಿದೆ. ಭಾರತದ ಮುಖ್ಯ ಸಮಾಲೋಚಕ, ವಾಣಿಜ್ಯ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿ ದರ್ಪಣ್ ಜೈನ್ ಮತ್ತು ವಿದೇಶಾಂಗ ಸಚಿವಾಲಯದ ಪ್ರತಿನಿಧಿಗಳು ನಿಯೋಗದ ನೇತೃತ್ವ ವಹಿಸಿದ್ದಾರೆ. ಈ ಸಭೆಯು ಮಧ್ಯಂತರ ವ್ಯಾಪಾರ ಒಪ್ಪಂದದ ಕುರಿತು ಈಗಾಗಲೇ ನಡೆದಿರುವ ಚರ್ಚೆಗಳನ್ನು ಮುಂದಕ್ಕೆ ಕೊಂಡೊಯ್ಯುವ ನಿರೀಕ್ಷೆಯಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

<><><><>

ಭಾರತ ಮತ್ತು ಬ್ರಿಟನ್ ತಮ್ಮ ರಕ್ಷಣಾ ಪಾಲುದಾರಿಕೆಯನ್ನು ಬಲಪಡಿಸುವಲ್ಲಿ ಮಹತ್ವದ ಹೆಜ್ಜೆ ಇಟ್ಟಿವೆ. ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಅವರು ಲಂಡನ್‌ಗೆ ಮೂರು ದಿನಗಳ ಅಧಿಕೃತ ಭೇಟಿಯಲ್ಲಿದ್ದಾರೆ. ಸೈಬರ್ ಭದ್ರತೆ, ಗುಪ್ತಚರ ಮಾಹಿತಿ ಹಂಚಿಕೆ, ರಕ್ಷಣಾ ಕೈಗಾರಿಕಾ ಸಹಯೋಗ ಮತ್ತು ಜಂಟಿ ಮಿಲಿಟರಿ ಸಮರಾಭ್ಯಾಸ ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿ ಸಹಕಾರವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಮಾತುಕತೆಗಳು ನಡೆಯಲಿವೆ.

<><><><>

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ವಿರುದ್ಧ ಮುಂಬೈ ಇಂಡಿಯನ್ಸ್ ೯೯ ರನ್‌ಗಳಿಂದ ಭರ್ಜರಿ ಗೆಲುವು ದಾಖಲಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಮುಂಬೈ ಇಂಡಿಯನ್ಸ್ ನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೧೯೯ ರನ್ ಗಳಿಸಿತು. ಈ ಗುರಿಯನ್ನು ಬೆನ್ನತ್ತಿದ ಗುಜರಾತ್ ಟೈಟಾನ್ಸ್ ೧೫.೫ ಓವರ್‌ಗಳಲ್ಲಿ ೧೦೦ ರನ್‌ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು. ಮುಂಬೈ ಇಂಡಿಯನ್ಸ್ ಪರ ಅಶ್ವನಿ ಕುಮಾರ್ ೪ ವಿಕೆಟ್ ಕಬಳಿಸಿದರು. ಶತಕ ಸಿಡಿಸಿದ ತಿಲಕ್ ವರ್ಮಾ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಹೈದರಾಬಾದ್‌ನ ರಾಜೀವ್‌ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಇಂದು ನಡೆಯುವ ಐಪಿಎಲ್ ಟಿ-೨೦ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>